ಪಿರಿಯಾ ಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ವಿದ್ಯುತ್ ಉಪ ಸ್ಥಾವರ ಸ್ಥಾಪನೆ

762(798) ಶ್ರೀ ಬಸವರಾಜು ಹೆಚ್.ಸಿ. (ಪಿರಿಯಾಪಟ್ಟಣ) ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರದ ರಾವಂದೂರು, ಬೈಲಕುಪ್ಪೆ ಹಾಗೂ ಹೊಸುರು ಗ್ರಾಮಗಳಲ್ಲಿ ಉಪ ವಿದ್ಯುತ್ ಸ್ಥಾವರ ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆ ಸರ್ಕಾರಕ್ಕೆ ಬಂದಿದೆಯೆ;

ಆ) ಬಂದಿದ್ದಲ್ಲಿ ಪ್ರಸ್ತಾವನೆಗಳಿ ಮಂಜೂರಾತಿ ನೀಡಲಾಗಿದೆಯೇ;

ಇ) ಕಾಮಗಾರಿ ಪ್ರಾರಂಭಿಸುವುದು ಯಾವಾಗ;

ಈ) ಕಾಮಗಾರಿಗೆ ನಿಗದಿಪಡಿಸಿರುವ ಅನುದಾನ ಎಷ್ಟು?

ಶ್ರೀ ಬಸವರಾಜ್ ಪಾಟೀಲ್ (ಇಂಧನ ರಾಜ್ಯ ಸಚಿವರು)

ಅ) ಬಂದಿರುವುದಿಲ್ಲ. ಮಂಗಳೂರು ವಿದ್ಯುತ್ ಸರಬರಾಜು ಕಂಪನಿಯಿಂದ ಪ್ರಸ್ತಾವನೆಯನ್ನು ನಿರೀಕ್ಷಿಸಲಾಗುತ್ತಿದೆ.

ಆ) ಆ, ಇ, ಮತ್ತು ಈ

ಮಂಗಳೂರು ವಿದ್ಯುತ್ ಸರಬರಾಜು ಕಂಪನಿಯಿಂದ ಪ್ರಸ್ತಾವನೆಗಳನ್ನು ಸ್ವೀಕರಿಸಿದ ನಂತರ ತಾಂತ್ರಿಕ ಸಮನ್ವಯ ಸಮಿತಿಯ ಮುಂದೆ ಪ್ರಸ್ತಾವನೆಗಳನ್ನು ಮಂಡಿಸಲಾಗುವುದು. ತಾಂತ್ರಿಕ ಸಮನ್ವಯ ಸಮಿತಿಯು ಈ ವಿಷಯದಲ್ಲಿ ತೆಗೆದುಕೊಳ್ಳುವ ತೀರ್ಮಾನದ ಪ್ರಕಾರ ಮುಂದಿನ ಕ್ರಮಗಳನ್ನು ಜರುಗಿಸಲಾಗುವುದು.

ಪಿರಿಯಾಪಟ್ಟಣ ನಗರಕ್ಕೆ ಕಾವೇರಿ ನದಿಯಿಂದ ನೀರು ಒದಗಿಸುವ ಯೋಜನೆ

763(799) ಶ್ರೀ ಬಸವರಾಜು ಹೆಚ್.ಸಿ. (ಪಿರಿಯಾಪಟ್ಟಣ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪಿರಿಯಾಪಟ್ಟಣ ನಗರಕ್ಕೆ ಕಾವೇರಿ ನದಿಯಿಂದ ನೀರನ್ನು ಎತ್ತಿ ಕುಡಿಯುವ ನೀರು ಒದಗಿಸುವ ಯೋಜನೆ ಯಾವ ಹಂತದಲ್ಲಿದೆ?

ಆ) ಹಿಂದಿನ ಅಧಿವೇಶನದಲ್ಲಿ ಮೂರು ತಿಂಗಳಲ್ಲಿ ನೀರು ಒದಗಿಸಲಾಗುವುದೆಂದು ಆಶ್ವಾಸನೆ ನೀಡಲಾಗಿದ್ದು ತಹಲ್‌ವರೆವಿಗೂ ಜಾರಿಯಾಗದಿರಲು ಕಾರಣವೇನು?

ಇ) ಇನ್ನು ಎಷ್ಟು ದಿವಸಗಳಲ್ಲಿ ಯೋಜನೆಯನ್ನು ಜಾರಿಗೊಳಿಸಲಾಗುವುದು?

ಈ) ಇದುವರೆವಿಗೂ ಯೋಜನೆಗೆ ವೆಚ್ಚವಾಗಿರುವ ಅನುದಾನ ಎಷ್ಟು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಯವರು)

ಅ) ಜಲಶುದ್ದೀಕರಣಗಾರದ ಕಾಮಗಾರಿ ಶೇ. 85 ರಷ್ಟು ಮುಗಿದಿದೆ. ಈ ಯೋಜನೆಯ ಉಳಿದ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡಿದ್ದು, ಈ ಯೋಜನೆಗೆ ವಿದ್ಯುತ್ ಸಂಪರ್ಕ ಪಡೆಯುವ ಪ್ರಕ್ರಿಯೆ ಮತ್ತು ಕೊಳವೆ ಮಾರ್ಗದ ಟೆಸ್ಟಿಂಗ್ ಕಾರ್ಯ ಪ್ರಗತಿಯಲ್ಲಿದೆ.

ಆ) ಜಲಶುದ್ದೀಕರಣಗಾರದ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಆದ ವಿಳಂಬದಿಂದ ಹಿಂದಿನ ಆಶ್ವಾಸನೆಯಂತೆ ಮೂರು ತಿಂಗಳಲ್ಲಿ ನೀರನ್ನು ಒದಗಿಸಲು ಸಾಧ್ಯವಾಗಿರುವುದಿಲ್ಲ.